Akashvani : Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

13.07.2026 18.40 hrs

---

ಮುಖ್ಯಾಂಶಗಳು

- ಇದೇ ೧೫ ರ ಬಳಿಕ ಕಾವೇರಿ ನೀರು ಹರಿಸುವ ಬಗ್ಗೆ ತೀರ್ಮಾನ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
- ಬೆಂಗಳೂರು ಸಂಚಾರ ವ್ಯವಸ್ಥೆ ಸುಧಾರಿಸಲು ತಂತ್ರಜ್ಞಾನ ಆಧಾರಿತ ಕ್ರಮಗಳಿಗೆ ಆದ್ಯತೆ - ಗೃಹ ಸಚಿವ ಪ್ರಿಯಾಂಕ್ ಖರ್ಗೆ
- ಸರ್ಕಾರದ ಆರ್ಥಿಕ ಪರಿಸ್ಥಿತಿ ಸಂಪೂರ್ಣವಾಗಿ ಕುಸಿದಿದೆ- ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ
- ರಾಜ್ಯದ ಬಹುತೇಕ ಜಿಲ್ಲೆಗಳ ಉಷ್ಣಾಂಶದಲ್ಲಿ ಏರಿಕೆ; ಬೆಂಗಳೂರಿನಲ್ಲೂ ಬಿರುಬಿಸಿಲು

---

ಇದೇ ೧೫ ರಂದು ಕಾವೇರಿ ಮಂಡಳಿ ಸಭೆ ನಡೆಯಲಿದ್ದು, ನದಿ ನೀರಿನ ಹೋರಾಟದ ರೂಪುರೇಷೆ ಕುರಿತಂತೆ ಚರ್ಚೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಭೆಯ ಬಳಿಕ ಕಾವೇರಿ ನೀರು ಹರಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ.

ಕಾವೇರಿ ವಿಚಾರದಲ್ಲಿ ರೈತರಿಗೂ ನೆರವಾಗಬೇಕು. ಕುಡಿಯುವ ನೀರನ್ನೂ ಪೂರೈಸಬೇಕು. ಜೊತೆಗೆ ತಮಿಳುನಾಡು ಪಾಲಿನ ನೀರು ಹರಿಸುವ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡಬೇಕು ಎಂದು ತಿಳಿಸಿದ್ದಾರೆ.

ಇದೇ ವೇಳೆ, ಆಗಸ್ಟ್ ೬ ರಿಂದ ಅಧಿವೇಶನ ಕರೆಯಲು ತೀರ್ಮಾನಿಸಲಾಗಿದೆ ಎಂದು ಹೇಳಿದ್ದಾರೆ.

ಇನ್ನುಮುಂದೆ ತಿರುಪತಿಯಲ್ಲಿ ನಡೆಯುವ ಮೊದಲ ಆರತಿಯಲ್ಲಿ ರಾಜ್ಯದ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸಬಹುದು. ತಿರುಪತಿ ದೇವಾಲಯದ ಮಾರ್ಗಸೂಚಿಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

---

ಜಲಸಂಪನ್ಮೂಲ ಇಲಾಖೆಯ ಸಚಿವ ರಾಮಲಿಂಗಾರೆಡ್ಡಿ ಅಧ್ಯಕ್ಷತೆಯಲ್ಲಿ ಇಂದು ರಾಮನಗರ ಜಿಲ್ಲಾ ವಿಪತ್ತು ನಿರ್ವಹಣಾ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದಂತೆ ಜೂನ್‌ನಲ್ಲಿ ತಮಿಳುನಾಡಿಗೆ ನಿರ್ದಿಷ್ಟ ಪ್ರಮಾಣದ ನೀರು ಹರಿಸಬೇಕೆಂಬ ನಿಯಮವಿದೆ. ಆದರೆ ರಾಜ್ಯದಲ್ಲಿ ಕುಡಿಯುವ ನೀರಿಗೆ ಮತ್ತು ರೈತರ ಬೆಳೆಗಳಿಗೆ ನೀರಿನ ಅಭಾವವಿರುವುದರಿಂದ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಾಗಿಲ್ಲ ಎಂದು ತಿಳಿಸಿದ್ದಾರೆ.

ಧ್ವನಿ: ಸಚಿವ ರಾಮಲಿಂಗಾರೆಡ್ಡಿ (    ಸೆಕೆಂಡ್ಸ್)

ಜುಲೈ ತಿಂಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ವಾಡಿಕೆ ಪ್ರಮಾಣಕ್ಕಿಂತ ಕಡಿಮೆ ಮಳೆಯಾಗಿದ್ದು, ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಹೊಸ ಕೊಳವೆ ಬಾವಿಗಳನ್ನು ಕೊರೆಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

---

ಬೆಂಗಳೂರು ನಗರದ ಸಂಚಾರ ದಟ್ಟಣೆ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಿ, ಸಾರ್ವಜನಿಕರಿಗೆ ಸುಗಮ ಹಾಗೂ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ತಂತ್ರಜ್ಞಾನ ಆಧಾರಿತ ಪರಿಹಾರಗಳಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬೆಂಗಳೂರು ನಗರದ ಎಲ್ಲ ಸಂಚಾರ ವಿಭಾಗದ ಡಿಸಿಪಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು ನಗರದ ಟ್ರಾಫಿಕ್ ಡಿಸಿಪಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಂಗಳೂರು ಇಂದು ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಸ್ಥಾನ ಗಳಿಸಿದ್ದು, ವಿಶ್ವದ ಪ್ರಮುಖ ಐಟಿ ಕಂಪನಿಗಳು, ಬಹುರಾಷ್ಟ್ರೀಯ ಸಂಸ್ಥೆಗಳು ಹಾಗೂ ಹೂಡಿಕೆದಾರರು ಬೆಂಗಳೂರನ್ನು ತಮ್ಮ ವ್ಯವಹಾರ ಮತ್ತು ಹೂಡಿಕೆಯ ಕೇಂದ್ರವಾಗಿ ಆಯ್ಕೆ ಮಾಡುತ್ತಿದ್ದಾರೆ. ಇಂತಹ ಜಾಗತಿಕ ನಗರಕ್ಕೆ ತಕ್ಕಂತೆ ವಿಶ್ವಮಟ್ಟದ ಸಂಚಾರ ನಿರ್ವಹಣಾ ವ್ಯವಸ್ಥೆಯನ್ನು ರೂಪಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದ್ದಾರೆ.

ಕೃತಕ ಬುದ್ಧಿಮತ್ತೆ, ಸ್ಮಾರ್ಟ್ ಸಿಗ್ನಲ್ ವ್ಯವಸ್ಥೆ, ರಿಯಲ್-ಟೈಮ್ ಟ್ರಾಫಿಕ್ ಮಾನಿಟರಿಂಗ್ ಹಾಗೂ ಡೇಟಾ ಆಧಾರಿತ ಸಂಚಾರ ನಿರ್ವಹಣಾ ಕ್ರಮಗಳನ್ನು ಇನ್ನಷ್ಟು ವ್ಯಾಪಕವಾಗಿ ಅಳವಡಿಸಿಕೊಳ್ಳುವ ಕುರಿತು ಅಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

---

ವಿಶ್ವವಿದ್ಯಾನಿಲಯಗಳಲ್ಲಿ ಗುಣಮಟ್ಟದ ಶೈಕ್ಷಣಿಕ ಮೂಲಸೌಕರ್ಯಗಳ ನಿರ್ಮಾಣವು ಜ್ಞಾನ, ಸಂಶೋಧನೆ, ನಾವೀನ್ಯತೆ ಹಾಗೂ ರಾಷ್ಟ್ರ ನಿರ್ಮಾಣಕ್ಕೆ ಭದ್ರ ಬುನಾದಿಯಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ತುಮಕೂರು ವಿಶ್ವವಿದ್ಯಾನಿಲಯದ ಜ್ಞಾನಸಿರಿ ಕ್ಯಾಂಪಸ್‌ನ ಬಿದರಕಟ್ಟೆಯಲ್ಲಿ ನಡೆದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಅಭಿವೃದ್ಧಿ ಹೊಂದಿದ ಭಾರತ-೨೦೪೭" ಗುರಿ ಸಾಧನೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದ್ದಾರೆ.

---

೧೦ ವರ್ಷಗಳಿಗೊಮ್ಮೆ ನಡೆಯುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ- ಎಸ್‌ಐಆರ್ ರಾಜ್ಯದಲ್ಲಿ ಸಮರ್ಪಕವಾಗಿ ನಡೆಯಬೇಕು ಎಂದು ವಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದರೆ, ರಾಜ್ಯ ಸರ್ಕಾರವು ಎಸ್‌ಐಆರ್ ಪ್ರಕ್ರಿಯೆಯನ್ನೇ ಹೈಜಾಕ್ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಎಸ್‌ಐಆರ್ ಮೂಲಕ ಅಲ್ಪಸಂಖ್ಯಾತರನ್ನು ಓಲೈಸಲು ಸರ್ಕಾರ ಮುಂದಾಗಿದೆ ಎಂದು ದೂರಿದ್ದಾರೆ.

ಜನವರಿಯಿಂದ ಸರ್ಕಾರ ಗೃಹಲಕ್ಷ್ಮಿ ಹಣ ನೀಡಿಲ್ಲ, ಸರ್ಕಾರದ ಆರ್ಥಿಕ ಪರಿಸ್ಥಿತಿ ಸಂಪೂರ್ಣವಾಗಿ ಕುಸಿದಿದೆ ಎಂದು ಟೀಕಿಸಿದ್ದಾರೆ.

---

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನವನ್ನು ಇನ್ನಷ್ಟು ವೇಗವಾಗಿ ಹಾಗೂ ಪರಿಣಾಮಕಾರಿ ನಡೆಸುವ ಸಲುವಾಗಿ ಜನರಲ್ಲಿ ಜಾಗೃತಿ ಮೂಡಿಸಲು ಬೀದರ್ ಜಿಲ್ಲೆಗೆ ಭೇಟಿ ನೀಡಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಇಂದು ಬೀದರ್ ಕೋಟೆಯ ಮುಖ್ಯದ್ವಾರದಲ್ಲಿ ಬೈಕ್ ರ‍್ಯಾಲಿಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಅರ್ಹರು ಗಣತಿ ನಮೂನೆ ಪಡೆದು ಭರ್ತಿ ಮಾಡಿ ನೀಡುವಂತೆ ಮನವಿ ಮಾಡಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-೨೦೨೬ ಕಾರ್ಯ ಪ್ರಗತಿಯಲ್ಲಿದ್ದು, ಶೇಕಡಾ ೧೦೦ ಗಣತಿ ನಮೂನೆಗಳನ್ನು ವಿತರಿಸಲಾಗಿದೆ.

ಧಾರವಾಡ ಜಿಲ್ಲೆಯಲ್ಲಿ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಪ್ರಗತಿಯಲ್ಲಿದ್ದು, ಮತದಾರರು ನಿಗದಿತ ಅವಧಿಯೊಳಗೆ ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಮತಗಟ್ಟೆ ಅಧಿಕಾರಿಗಳಿಗೆ ನೀಡಬೇಕು ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದ್ದಾರೆ.

ವಿಜಯಪುರ ಜಿಲ್ಲೆಯ ಬಬಲೇಶ್ವರ ವಿಧಾನಸಭಾ ಮತಕ್ಷೇತ್ರದಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅವಧಿಗೆ ಮುನ್ನವೇ ಶೇಕಡಾ ನೂರರಷ್ಟು ಪ್ರಗತಿ ಸಾಧಿಸಿದ ಮತಗಟ್ಟೆ ಅಧಿಕಾರಿಗಳನ್ನು ವಿಜಯಪುರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಇಂದು ಸನ್ಮಾನಿಸಲಾಯಿತು.

---

ಮಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾ ಪ್ರಜೆಗಳ ವಿರುದ್ಧದ ಕಾರ್ಯಾಚರಣೆಯನ್ನು ಪೊಲೀಸರು ಮತ್ತಷ್ಟು ತೀವ್ರಗೊಳಿಸಿದ್ದಾರೆ.

ನಗರದ ಉರ್ವಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಟ್ಟಡ ಕಾರ್ಮಿಕರಾಗಿ ದುಡಿಯುತ್ತಿದ್ದ ಶಂಕಿತ ಎಂಟು ಮಂದಿ ಬಾಂಗ್ಲಾ ಪ್ರಜೆಗಳನ್ನು ಪೊಲೀಸರು ವಿಚಾರಣೆಗೊಳಪಡಿಸಿದ್ದು, ಈ ಪೈಕಿ ಮೂರು ಮಂದಿ ಬಾಂಗ್ಲಾ ಪ್ರಜೆಗಳೆನ್ನುವುದು ದೃಢಪಟ್ಟಿದೆ. ಉಳಿದವರ ವಿಳಾಸ ಪತ್ತೆ ಕಾರ್ಯ ನಡೆಯುತ್ತಿದೆ.

ಮೂರು ದಿನಗಳ ಹಿಂದೆಯಷ್ಟೇ ಸುರತ್ಕಲ್ ಠಾಣಾ ವ್ಯಾಪ್ತಿಯ ಮುಕ್ಕ ಪ್ರದೇಶದಲ್ಲಿ ಕಟ್ಟಡ ಕಾರ್ಮಿಕರಾಗಿ ದುಡಿಯುತ್ತಿದ್ದ ೮ ಮಂದಿ ಬಾಂಗ್ಲಾ ಪ್ರಜೆಗಳನ್ನು ಪೊಲೀಸರು ಬಂಧಿಸಿದ್ದರು.

---

ಹಿರಿಯ ರಾಜಕಾರಣಿ, ರಾಜ್ಯಸಭೆ ಮಾಜಿ ಸದಸ್ಯ ಎಚ್.ಹನುಮಂತಪ್ಪ ಅವರ ಅಂತ್ಯಕ್ರಿಯೆ ಚಿತ್ರದುರ್ಗದಲ್ಲಿಂದು ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಂಸದ ಗೋವಿಂದ ಕಾರಜೋಳ ಸೇರಿದಂತೆ ಹಲವು ಗಣ್ಯರು, ಮಠಾಧೀಶರು ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡರು.

ಈ ಮಧ್ಯೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಹನುಮಂತಪ್ಪ ಅವರು, ಚಿತ್ರದುರ್ಗ ಜಿಲ್ಲೆಯ ಕೃಷಿ ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗಳಿಗಾಗಿ ದೊಡ್ಡ ಹೋರಾಟ ನಡೆಸಿದ್ದರು ಎಂದು ಗುಣಗಾನ ಮಾಡಿದರು.

---

ಬೆಂಗಳೂರಿನಲ್ಲಿ ಮಳೆಗಾಲದಲ್ಲೂ ಬಿರುಬಿಸಿಲು ಉಂಟಾಗಿದ್ದು, ಜುಲೈ ತಿಂಗಳಿನಲ್ಲೇ ಬೇಸಿಗೆಯ ಅನುಭವವಾಗುತ್ತಿದೆ. ಗರಿಷ್ಠ ಉಷ್ಣಾಂಶದಲ್ಲಿ ಗಣನೀಯ ಏರಿಕೆ ಕಂಡುಬಂದಿದ್ದು, ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ೩೧.೧ ಡಿಗ್ರಿ, ಬೆಂಗಳೂರು ನಗರದಲ್ಲಿ ೩೨ ಡಿಗ್ರಿ ಹಾಗೂ ಎಚ್.ಎ.ಎಲ್ ವಿಮಾನ ನಿಲ್ದಾಣದಲ್ಲಿ ೩೨.೮ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಕರಾವಳಿ ಜಿಲ್ಲೆಗಳಲ್ಲಿ ಹಾಗೂ ಮಲೆನಾಡು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆ ಕ್ಷೀಣಿಸಿದ್ದು, ಬಿಸಿಲಿನ ಪ್ರಮಾಣದಲ್ಲಿ ಗಣನೀಯ ಏರಿಕೆಯಾಗಿದೆ. ಈ ಜಿಲ್ಲೆಗಳಲ್ಲಿ ಇಂದು ಹಗುರ ಮಳೆಯಾಗುವ ಸಾಧ್ಯತೆಯಿದೆ. ಕರ್ನಾಟಕದ ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನಲ್ಲೂ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

---

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಯಾದಗಿರಿ ಜಿಲ್ಲೆಯಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಆಗದಿರುವ ಹಿನ್ನೆಲೆಯಲ್ಲಿ ರೈತರು ಜಲಾಶಯಗಳ ನೀರನ್ನು ಅವಲಂಬಿಸಿ ಬಿತ್ತನೆ ಮಾಡದೆ, ಮಳೆ ಆಧಾರಿತ ಹಾಗೂ ಕಡಿಮೆ ನೀರು ಅಗತ್ಯವಿರುವ ಬೆಳೆಗಳನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ್ ಪಾಂಡ್ವೆ ಮನವಿ ಮಾಡಿದ್ದಾರೆ.

೨. ಕೋಲಾರದಲ್ಲಿ ಮಾವು ಬೆಳೆಗಾರರ ಹಿತದೃಷ್ಟಿಯಿಂದ ಪ್ರಸ್ತುತ ನಿಗದಿಪಡಿಸಿರುವ ೧ ಲಕ್ಷದ ೩೦ ಸಾವಿರ ಮೆಟ್ರಿಕ್ ಟನ್ ಮಾವು ಖರೀದಿ ಮಿತಿಯನ್ನು ಹೆಚ್ಚಿಸುವಂತೆ ಹಾಗೂ ಸ್ಥಗಿತಗೊಂಡಿರುವ ರೈತರ ನೋಂದಣಿ ಪ್ರಕ್ರಿಯೆಯನ್ನು ಮರುಪ್ರಾರಂಭಿಸುವಂತೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಬಗ್ಗೆ ಸಕಾರಾತ್ಮಕ ಆದೇಶ ಹೊರಬೀಳುವ ನಿರೀಕ್ಷೆಯಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

__________ ಮುಕ್ತಾಯ __________